27

ಮೈಸೂರು ಸಬ್ ಜಡ್ಜ್‌ರವರ ಕೋರ್ಟ್‌ನಲ್ಲಿ.

ಸ್ ೧೯೦೪—೧೯೦೫ನೆ ಇಸವಿ ಮಿ|| ಅರ್ಜೀ ನಂಬರು 13.

ಮೃತಪಟ್ಟ ಭಾಗಮ್ಮನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು, ಮೈಸೂರು ಶ್ರೀರಾಂಪೇಟೆಯಲ್ಲಿರುವ ಪಟ್ಟದಪುರದ ಭಾಗವತ ರಾಮೈಯ್ಯನವ ಹೆಂಡತಿ ಭಾಗಮ್ಮನ ಮಗಳು ಲಕ್ಷ್ಮಿದೇವಮ್ಮ ಮೈನರ್, ಗಾರ್ಡಿಯನ್ ಗಂಡ ನರಸಿಂಹಯ್ಯ, ಮೃತಪಟ್ಟ ಸದರೀ ಭಾಗಮ್ಮನವರಿಗೆ ಮಗಳು ಆಗಬೇಕೆಂಬ ಹಕ್ಕು ದಾರಿ ಮೇಲೆ ಮೈಸೂರು ವಾಸಸ್ಥರಾಗಿ ಮೃತಪಟ್ಟ ಭಾಗಮ್ಮನವರ ಜಿಂದಗಿ ಬಗ್ಯಾಗ ಬರತಕ್ಕ ಸಾಲವನ್ನು ವಸೂಲ್ಮಾಡುವದಕ್ಕೆ 1901ನೆ ಇಸವಿ 7ನೆ ರೆಗ್ಯುಲೇಷನ್ ಪ್ರಕಾರ ಸರ್ಟಿಫಿಕೇಟು ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿ ಇರುತ್ತಾರೆ.

ಸದರೀ ದರಖಾಸ್ತುದಾರರಾದ ಮೇಲ್ಕಂಡವರ ಅರ್ಜಿಯನ್ನು 1904ನೆ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 6ರಲ್ಲು ಕೇಳಿ ಸರ್ಟಿಫಿಕೇಟು ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಭಾಗಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರು ಈ ಕೋರ್ಟಿನಲ್ಲಿ ಹಾಜರು ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೯೦೪ನೆ ಇಸವಿ ಜುಲೈ ತಿಂಗಳು 27ನೆ ತಾರೀಖಿನಲ್ಲಿ ಕೋರ್ಟು ಮೊಹರು ನಿಶಿ ನಮ್ಮ ದಸ್ತಖತ್ತಿನ್ಹಡನೆ ಕೊಡೋಣಾಗಿದೆ.

ಸ್ ೧೯೦೩—೧೯೦೪ನೆ ಇಸವಿ ಮಿ|| ಅರ್ಜೀ ನಂಬರ್ .580

ಮೃತಪಟ್ಟ ನನ್ನಮ್ಮನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಮೈಸೂರು ಕಿಲ್ಲೆಯಲ್ಲಿರುವ ಪುರುಷೋತ್ತಮ ಭಟ್ಟರ ಮೊಮ್ಮಗ ಪುರುಷೋತ್ತಮ ವೆಂಕಟಸುಬ್ಬಾ ಶಾಸ್ತ್ರಿ, ಮೃತಪಟ್ಟ ಸದರೀ ನನ್ನಮ್ಮನವರಿಗೆ ಸೋದರ ಅಳಿಯ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಸ್ಥಳದ ವಾಸಸ್ಥರಾಗಿ ಮೃತಪಟ್ಟ ನನ್ನಮ್ಮನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ಮಾಡುವದಕ್ಕೆ ಸ್ ೧೯೦೧ನೆ ಇಸವಿ 7ನೆ ರೆಗ್ಯುಲೇಷ್ ಪ್ರಕಾರ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮೇಲ್ಕಂಡವರ ಅರ್ಜಿಯನ್ನು ಸ್ ೧೯೦೪ನೆ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 6ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನನ್ನಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೯೦೪ನೆ ಇಸವಿ ಜುಲೈ ತಿಂಗಳು 27ನೆ ತಾರೀಖಿನಲ್ಲಿ ಕೋರ್ಟು ಮೊಹರಿನಿಶಿ ನಮ್ಮ ದಸ್ತಖತ್ತಿನ್ಹಡನೆ ಕೊಡೋಣಾಗಿದೆ.

ಟಿ. ಪರಮೇಶ್ವರ ಅಯ್ಯರ್,
ಸಬ್ ಜಡ್ಜ್.

ಚಿಕ್ಕಮಗಳೂರು ಸಬ್ ಜಡ್ಜ್‌ರವರ ಕೋರ್ಟ್‌ನಲ್ಲಿ.

ಸ್ ೧೯೦೪—೧೯೦೫ನೆ ಇಸವಿ ಅರ್ಜೀ ನಂಬರ್ 49.

ಮೃತಪಟ್ಟ ಪಟೇಲ ಮಾಸ್ತಿಗೌಡನ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ರು ಕಡೂರು ಡಿಸ್ಟ್ರಿಕ್ಟ್ಟು ಚಿಕ್ಕಮೆಗಳೂರು ತಾಲ್ಲೂಕು ಆರದವಳ್ಳಿ ಗ್ರಾಮದಲ್ಲಿರುವ 1ನೆ ದೊಡ್ಡ ಪುಟ್ಟೆಗೌಡ, 2ನೆ ಸಂಣ ಚಿಕ್ಕೆಗೌಡ, ಮೃತಪಟ್ಟ ಪಟೇಲ ಮಾಸ್ತಿ ಗೌಡನವರಿಗೆ ಮಕ್ಕಳು ಆಗಬೇಕೆಂಬ ಹಕ್ಕುದಾರಿ ಮೇಲೆ ಚಿಕ್ಕಮಗಳೂರು ತಾಲ್ಲೂಕು ಆರದವಳ್ಳಿ ಗ್ರಾಮದಲ್ಲಿ ವಾಸಸ್ಥರಾಗಿ ಮೃತಪಟ್ಟ ಮಾಸ್ತಿಗೌಡನವರ ಜಿಂದಿಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1901ನೆ ಇಸವಿ 7ನೆ ರೆಗ್ಯುಲೇಷ್ ಪ್ರಕಾರ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮೇಲ್ಕಂಡವರ ಅರ್ಜಿಯನ್ನು ಸ್ ೧೯೦೪ನೆ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 20ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಮಾಸ್ತಿಗೌಡನ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೯೦೪ನೆ ಇಸವಿ ಜುಲ್ಯ ತಿಂಗಳು 27ನೆ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತಿನ್ಹಡನೆ ಕೊಡೋಣಾಗಿದೆ.

ಎಂ. ಹಂಜಾಹುಸೇನ್,
ಸಬ್ ಜಡ್ಜ್.

ಬೆಂಗಳೂರ್ ಗವರ್ನಮೆಂಟ್ ಸೆಕ್ರಟೆರಿಯಲ್ ಬುಕ್ ಡಿಪೋ.

ನೋಟಿಸು.

ಈ ತಾರೀಖು 1ನೆ ಆಗಸ್ಟು 1904.

1905ನೆ ಸಾಲಿನ ಲೋವರ್ ಸೆಕಂಡರೀ ಟೆಕ್ಸ್‌ಟ್ ಗದ್ಯಭಾಗವು ಈಗ ಮಾರಾಟಕ್ಕೆ ಸಿದ್ಧವಾಗಿರುತ್ತೆಂಬದಾಗಿ ಇದರಿಂದ ತಿಳಿಸಲ್ಪಟ್ಟಿದೆ. ಖರೀದಿ ಪ್ರತಿ ಬಂದಕ್ಕೆ ಆಣೆ 2½ (ಎರಡುವರಾಹಣಗಳು.)

ಎಸ್. ಅಬ್ದುಲ್ ಹೈ,
ಕ್ಯೂರೇಟರ್.